ಇ) ಈ ವಿಷಯದಲ್ಲಿ ಬಹಳಷ್ಟು ಸಂಖ್ಯೆಯ ಬಡ ವಿದ್ಯಾರ್ಥಿಗಳು ಮತ್ತು ಮಧ್ಯಮ ಆರ್ಹತೆಯ ವಿದ್ಯಾರ್ಥಿಗಳ ವಿದ್ಯಾಭ್ಯಾಸದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೂಡಲೆ ಕ್ರಮ ಕೈಗೊಳ್ಳುವರೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :-

ಅ) ಬಂದಿಲ್ಲ.

ಆ) ಅಂತಹ ದೂರುಗಳು ಸರ್ಕಾರಕ್ಕೆ ಬಂದಿಲ್ಲ.

ಇ) ಅ. ಮತ್ತು ಆ. ನಲ್ಲಿ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ವಿಷಯ :- ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಸಮವಸ್ತ್ರ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 746 (1074)

ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ 1996-97 ನೇ ಸಾಲಿನಲ್ಲಿ ಸಮವಸ್ತ್ರಗಳನ್ನು ವಿತರಿಸಲಾಗಿದೆಯೆ?

ಆ) ಹಾಗಿದ್ದಲ್ಲಿ ಯಾವ ಯಾವ ತರಗತಿಗಳಿಗೆ ಯಾವ ಮಾನ ದಂಡದಲ್ಲಿ ಹಂಚಲಾಗಿದೆ?

ಇ) ಈಗಾಗಲೇ ಕೆಲವು ಶಾಲೆಗಳು ಈ ಸವಲತ್ತಿನಿಂದ ವಂಚಿತರಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದರೆ ಕಾರಣಗಳೇನು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :-

ಅ) ಇಲ್ಲ.

ಆ) 1 ನೇ ತರಗತಿಯಿಂದ 7 ನೇ ತರಗತಿಯವರೆಗೆ ಓದುತ್ತಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಎಲ್ಲಾ ಹೆಣ್ಣುಮಕ್ಕಳಿಗೆ ಹಾಗೂ 1 ರಿಂದ 4 ನೇ ತರಗತಿಯವರೆಗೆ ಓದುತ್ತಿರುವ ಎಲ್ಲಾ ಗಂಡು ಮಕ್ಕಳಿಗೂ 5 ನೇ ತರಗತಿಯಿಂದ 7 ನೇ ತರಗತಿಯವರೆಗೆ ಓದುತ್ತಿರುವ ಎಲ್ಲಾ ಪರಿಶಿಷ್ಟ ಜಾತಿ ಪಂಗಡದ ಗಂಡು ಮಕ್ಕಳಿಗೆ ಸಮವಸ್ತ್ರವನ್ನು ವಿತರಿಸಲು ಉದ್ದೇಶಿಸಿದೆ. ಇನ್ನೂ ಹಂಚಲಾಗಿಲ್ಲ.

ಇ) ಇನ್ನೂ ಯಾರಿಗೂ ಹಂಚದೇ ಇರುವ ಪ್ರಯುಕ್ತ ಕೆಲವು ಶಾಲೆಗಳು ವಂಚಿತವಾಗಿವೆ. ಎಂಬ ಪ್ರಶ್ನೆ ಇಲ್ಲ.

ಈ) ಮೇಲಿನಂತೆ.